ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಕೆಂಪೇಗೌಡ ಅಧ್ಯಯನ ಕೇಂದ್ರ

56 (65)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ): ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ವಿಶ್ವವಿದ್ಯಾಲಯದಲ್ಲಿ, ಕೆಂಪೇಗೌಡ ಅಧ್ಯಯನ ಕೇಂದ್ರ ಅಥವಾ ಕೆಂಪೇಗೌಡ ಅಧ್ಯಯನ ಪೀಠ ಸ್ಥಾಪಿಸುವ ಉದ್ದೇಶ ಸರ್ಕಾರದವರಿಗಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಆರಂಭಿಸಲಾಗುವುದು? ಹಾಗೂ ಇದರ ರೂಪು-ರೇಷೆಗಳೇನು?

ಇ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಹೆಚ್.ಡಿ.ಗೋವಿಂದೇಗೌಡ (ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುದಿಲ್ಲ,

ಇ) ಅನ್ವಯಿಸುವುದಿಲ್ಲ.

ಮಾಗಡಿ ತಾಲ್ಲೂಕಿನಲ್ಲಿ ವೈದ್ಯರುಗಳ ನೇಮಕ

57 (68)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನ ಹಲವಾರು ಪ್ರಾ.ಆ.ಕೇಂದ್ರ, ಪ್ರಾ.ಆ.ಘಟಕ, ತಾಲ್ಲೂಕು ಆಸ್ಪತ್ರೆಗಳಿಗೆ ವೈದ್ಯರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ?

ಇ) ಈ ಪ್ರಾ.ಆ.ಕೇಂದ್ರಗಳಿಗೆ ವೈದ್ಯಾಧಿಕಾರಿಗಳನ್ನು ಯಾವಾಗ ನೇಮಿಸಲಾಗುವುದು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):